ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 05–07–2018

ಪತ್ರಿಕಾ ಆಮಂತ್ರಣ

1. ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನರಾಂ ರವರ 32 ನೇ ಪುಣ್ಯ ಸ್ಮರಣೆ

ಪ್ರತಿಮೆಗೆ ಮಾಲಾರ್ಪಣೆ:
ಹೆಚ್.ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿಗಳು

ಡಾ. ಜಿ. ಪರಮೇಶ್ವರ, ಉಪ ಮುಖ್ಯಮಂತ್ರಿಗಳು

ಪ್ರಿಯಾಂಕ್ ಖರ್ಗೆ, ಸಮಾಜ ಕಲ್ಯಾಣ ಸಚಿವರು.

ದಿನಾಂಕ: 06–07–2018, ಶುಕ್ರವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ.

ಸ್ಥಳ: ವಿಧಾನಸೌಧದ ಪಶ್ಚಿಮ ದ್ವಾರ, ಬೆಂಗಳೂರು.

ಸಂಖ್ಯೆ:

ಪತ್ರಿಕಾ ಪ್ರಕಟಣೆ

## ಹಿಂದಿನ ಸರ್ಕಾರದ ಆಯವ್ಯಯದಲ್ಲಿ ಮಂಡಿಸಲಾಗಿದ್ದ ಎಲ್ಲಾ ಯೋಜನೆಗಳನ್ನು ಮುಂದುವರಿಸಲಾಗುವುದು- ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ

ಬೆಂಗಳೂರು, ಜುಲೈ 5 (ಕರ್ನಾಟಕ ವಾರ್ತೆ)

ಹಿಂದಿನ ಸರ್ಕಾರದಲ್ಲಿ 2018 ರ ಫೆಬ್ರವರಿ ತಿಂಗಳಲ್ಲಿ ಮಂಡಿಸಿದ್ದ 2018–19 ರ ಸಾಲಿನ ಆಯವ್ಯಯದ ಮುಂದುವರೆದ ಪೂರಕ ಆಯವ್ಯಯವನ್ನು ಇಂದು ಮಂಡಿಸಿದ್ದು, ಹಿಂದಿನ ಸರ್ಕಾರದ ಆಯವ್ಯಯದಲ್ಲಿ ಮಂಡಿಸಲಾಗಿದ್ದ ಎಲ್ಲಾ ಯೋಜನೆಗಳನ್ನು ಮುಂದುವರಿಸಲಾಗುವುದು ಎಂದು ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ತಿಳಿಸಿದರು.

ನೂತನ ಸಮ್ಮಿಶ್ರ ಸರ್ಕಾರದ ಪೂರಕ ಆಯವ್ಯಯವನ್ನು ಇಂದು ವಿಧಾನಸೌಧದಲ್ಲಿ ಮಂಡಿಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು ಇಂದಿನ ಆಯವ್ಯಯ ಬಗ್ಗೆ ಅನ್ಯತ ಭಾವಿಸಬೇಕಿಲ್ಲ. ಹಿಂದಿನ ಸರ್ಕಾರದ ಆಯವ್ಯಯದ ಯೋಜನೆಗಳ ಜೊತೆ ಮತ್ತೊಂದಿಷ್ಟು ಹೊಸ ಯೋಜನೆಗಳನ್ನು ಜಾರಿಗೊಳಿಸಲಾಗಿದ್ದು, ಸಮ್ಮಿಶ್ರ ಸರ್ಕಾರದಲ್ಲಿ ಎರಡೂ ಪಕ್ಷಗಳ ಪ್ರಣಾಳಿಕೆಯ ಯೋಜನೆಗಳ ಆಯವ್ಯಯ ಇದಾಗಿದೆ.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ್ದ 2018-19 ನೇ ಸಾಲಿನ ಆಯವ್ಯಯ 2,09,181 ಕೋಟಿ ರೂ. ಆಗಿತ್ತು. ಇಂದು ಅದು ಒಟ್ಟು 2,18,488 ಕೋಟಿ ರೂ. ಆಗಿದ್ದು ಒಟ್ಟು 9,307 ಕೋಟಿ ರೂ ಹೆಚ್ಚುವರಿಯಾಗಿ ಮಂಡಿಸಲಾಗಿದೆ. ಆಯವ್ಯಯ ಸಂಪೂರ್ಣ ಶಾಸನಬದ್ಧವಾಗಿದ್ದು ಆರ್ಥಿಕ ನಿಯಮಗಳಾನುಸಾರ ಕ್ರಮಬದ್ಧವಾಗಿದೆ.

ರೈತರ 2.00 ಲಕ್ಷ ರೂ. ವರೆಗಿನ ಸಾಲ ಮನ್ನಾದಿಂದ ಒಟ್ಟು 34,000 ಕೋಟಿ ರೂ. ವ್ಯಯ ಆಗಲಿದೆ ಎಂದು ಅಂದಾಜಿಸಲಾಗಿದೆ. ಪಡೆದ ಸಾಲವನ್ನು ಹಿಂತಿರುಗಿಸಿ ಬ್ಯಾಂಕ್‌ನೊಂದಿಗೆ ಉತ್ತಮ ವ್ಯವಹಾರವನ್ನು ಹೊಂದಿರುವ ರೈತರಿಗೆ 25,000 ರೂ. ಗಳನ್ನು ಪ್ರೋತ್ಸಾಹ ರೂಪದಲ್ಲಿ ನೀಡಲಾಗುವುದು. 15,850 ಕೋಟಿ ರೂ. ಗಳ ವೆಚ್ಚದಲ್ಲಿ ಬೆಂಗಳೂರು ಅಭಿವೃದ್ಧಿಗಾಗಿ 4 ವರ್ಷದ ಗುರಿ ಹಾಕಿಕೊಳ್ಳಲಾಗಿದೆ. ಇದರಲ್ಲಿ ಹಲವು ಯೋಜನೆಗಳನ್ನು ರೂಪಿಸಲಾಗಿದ್ದು ನವಬೆಂಗಳೂರು ನಿರ್ಮಾಣಕ್ಕಾಗಿ ಪಣ ತೊಡಲಾಗಿದೆ.

ಆಯವ್ಯಯದಲ್ಲಿ ಘೋಷಿಸದ ಹಲವು ಯೋಜನೆಗಳನ್ನು ರೂಪಿಸಲಾಗುತ್ತಿದ್ದು, ಅದರಲ್ಲಿ ಮುಖ್ಯವಾಗಿ ಆರ್ಯ ವೈಶ್ಯ ಅಭಿವೃದ್ಧಿ ಮಂಡಳಿಗೆ 25 ಕೋಟಿ ರೂ. ಅನುದಾನ ನೀಡಲಾಗಿದೆ.

ಇದೊಂದು ದಾಖಲೆಯ ಆಯವ್ಯಯವಾಗಿದ್ದು ಆರ್ಥಿಕ ಶಿಸ್ತನ್ನು ಕಾಪಾಡಿಕೊಳ್ಳಲಾಗಿದೆ. ಹೈದ್ರಾಬಾದ್-ಕರ್ನಾಟಕದ ಅಭಿವೃದ್ಧಿಗೆ ಹೆಚ್ಚು ಒತ್ತನ್ನು ನೀಡಲಾಗಿದ್ದು ವಿವಿಧ ಜಿಲ್ಲೆಗಳ ಅನುಸಾರವಾಗಿ ಉದ್ಯಮಗಳನ್ನು ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಈ ಸಮಯದಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಲೋಕೋಪಯೋಗಿ ಇಲಾಖೆ ಸಚಿವ ಹೆಚ್.ಡಿ. ರೇವಣ್ಣ ಸೇರಿದಂತೆ ಅನೇಕ ಸಚಿವರುಗಳು ಹಾಗೂ ಶಾಸಕರು ಉಪಸ್ಥಿತರಿದ್ದರು.

ಜೆಡಿ:ಜಿಪಿಆರ್.

ಸಂಖ್ಯೆ 598/698

## ಎಸಿಬಿ ದಾಳಿ

ಬೆಂಗಳೂರು, ಜುಲೈ 5 (ಕರ್ನಾಟಕ ವಾರ್ತೆ)

**ಬಾಗಲಕೋಟೆ**

ದಿನಾಂಕ: 05.07.2018 ರಂದು ಬಾಗಲಕೋಟೆ ಭ್ರಷ್ಟಾಚಾರ ನಿಗ್ರಹ ದಳವು **ಶ್ರೀ.ಶಿವಲಿಂಗಪ್ಪ ಬಸಪ್ಪ ಹಡಗಲಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಲೆಕ್ಟ್ರೀಕಲ್ ಸಬ್-ಡಿವಿಷನ್ ಕರ್ನಾಟಕ ನಿರಾವರಿ ನಿಗಮ, ಸವದತ್ತಿ ಎಂಬುವವರು** ತಮ್ಮ ಬಲ್ಲ ಮೂಲಗಳಗಿಂತ ಅಸಮತೋಲನ ಆಸ್ತಿ-ಪಾಸ್ತಿಗಳನ್ನು ಹೊಂದಿರುವ ಬಗ್ಗೆ ವಿಶ್ವಾಸಾರ್ಹ ಮಾಹಿತಿ ಸಂಗ್ರಹಿಸಿ ಅಕ್ರಮ ಆಸ್ತಿ ಗಳಕೆ ಪ್ರಕರಣಗಳನ್ನು ದಾಖಲಿಸಿ ಅವರಿಗೆ ಸಂಬಂಧಿಸಿದ ಇವರ ಯರಗಟ್ಟಿಯಲ್ಲಿನ ವಾಸದ ಮನೆ ಹಾಗೂ ಇವರು ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಗಳ **ಮೇಲೆ** ಇಂದು ದಾಳ ನಡೆಸಿರುತ್ತದೆ.

ಬಾಗಲಕೋಟೆ ಎಸಿಬಿ ಪೊಲೀಸ್ ಠಾಣೆಯ ತಂಡಗಳಿಂದ ಮೇಲ್ಕಂಡ ಆರೋಪಿತ ಸರ್ಕಾರಿ ನೌಕರರ ವಿರುದ್ಧ ದಾಳಿ ಮುಂದುವರೆದಿದ್ದು, ಸದರಿ ಸರ್ಕಾರಿ ನೌಕರರು ಹೊಂದಿರುವ ಆಸ್ತಿ-ಪಾಸ್ತಿಗಳ ಮೂಲದ ಬಗ್ಗೆ ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಮೈಸೂರು**

ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕು ಅತ್ತಿಗುಪ್ಪೆ ಗ್ರಾಮದ ನಿವಾಸಿಯಾಗಿರುವ ಫಿರ್ಯಾದಿರವರು ಶಿರಿಯೂರು ಗ್ರಾಮದಲ್ಲಿ ಖರೀದಿಸಿರುವ ಜಮೀನನ್ನು ತನ್ನ ಹೆಸರಿಗೆ ಖಾತೆ ಬದಲಾವಣೆ ಮಾಡಿಕೊಡುವಂತೆ ಕೋರಿರುತ್ತಾರೆ. ಶ್ರೀ. ಜಿ.ವಿ ವಿಷಕಂಠನಾಯ್ಕ, ರಾಜಸ್ವ ನಿರೀಕ್ಷಕರು, ನಾಡ ಕಛೇರಿ, ಗಾವಡಗೆರೆ ಹೋಬಳಿ, ಹುಣಸೂರು ತಾಲ್ಲೂಕು ರವರು ಅರ್ಜಿದಾರರ ಹೆಸರಿಗೆ ಖಾತೆ ಬದಲಾವಣೆ ಮಾಡಿಕೊಡಲು ₹ 5,000/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:04.07.2018 ರಂದು ಶ್ರೀ. ಜಿ.ವಿ ವಿಷಕಂಠನಾಯ್ಕ, ರಾಜಸ್ವ ನಿರೀಕ್ಷಕರು, ನಾಡ ಕಛೇರಿ, ಗಾವಡಗೆರೆ ಹೋಬಳಿ, ಹುಣಸೂರು ತಾಲ್ಲೂಕು ರವರು ಅರ್ಜಿದಾರರಿಂದ ₹ 4,000/- ಲಂಚದ ಹಣ ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಮೈಸೂರು ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿ ಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ.

**ತುಮಕೂರು**

ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕು ಚಿಕ್ಕಮಾಲೂರು ಗ್ರಾಮದ ನಿವಾಸಿಯಾಗಿರುವ ಫಿರ್ಯಾದಿರವರ ತಮ್ಮನ ಪತ್ನಿಯ ಹೆಸರಿನಲ್ಲಿ ಯರಗುಂಟೆ ಗ್ರಾಮದಲ್ಲಿ ಖರೀದಿಸಿರುವ ಜಮೀನಿನ ಖಾತೆ ಬದಲಾವಣೆಗಾಗಿ ಕೋರಿರುತ್ತಾರೆ. ಶ್ರೀ. ಚಂದ್ರಶೇಖರ್, ಗ್ರಾಮಲೆಕ್ಕಾಧಿಕಾರಿಗಳು, ಯಲ್ಕೂರು ಸರ್ಕಲ್, ಐಡಿ ಹಳ್ಳಿ ಹೋಬಳಿ, ಮಧುಗಿರಿ ತಾಲ್ಲೂಕು ರವರು ಅರ್ಜಿದಾರರ ತಮ್ಮನ ಪತ್ನಿಯ ಹೆಸರಿಗೆ ಖಾತೆ ಬದಲಾವಣೆ ಮಾಡಿಕೊಡಲು ₹ 15,000/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:04.07.2018 ರಂದು ಶ್ರೀ. ಚಂದ್ರಶೇಖರ್, ಗ್ರಾಮಲೆಕ್ಕಾಧಿಕಾರಿಗಳು, ಯಲ್ಕೂರು ಸರ್ಕಲ್, ಐಡಿ ಹಳ್ಳಿ ಹೋಬಳಿ, ಮಧುಗಿರಿ ತಾಲ್ಲೂಕು ಅರ್ಜಿದಾರರಿಂದ ₹ 4,500/- ಲಂಚದ ಹಣ ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ತುಮಕೂರು ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿ ಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ.

**ಕೋಲಾರ**

ಕೋಲಾರ ಟೌನ್ ಸುಮಂತಾ ನಗರದ ನಿವಾಸಿಯಾಗಿರುವ ಫಿರ್ಯಾದಿರವರು ಇ- ಸ್ವತ್ತಿನ ಖಾತೆಯಲ್ಲಿ ಬದಲಾವಣೆಗಾಗಿ ಸಲ್ಲಿಸಿರುತ್ತಾರೆ. ಶ್ರೀ.ನಾಗರಾಜ, ಎಸ್‌ಡಿಎ, ವಡಗುರು ಗ್ರಾಮ ಪಂಚಾಯಿತಿ ರವರು ಅರ್ಜಿದಾರರ ಖಾತೆ ಬದಲಾವಣೆ ಮಾಡಿಕೊಡಲು ₹ 10,000/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:05.07.2018 ರಂದು ಶ್ರೀ.ನಾಗರಾಜ, ಎಸ್‌ಡಿಎ, ವಡಗುರು ಗ್ರಾಮ ಪಂಚಾಯಿತಿ ರವರು ಅರ್ಜಿದಾರರಿಂದ ₹ 5,000/- ಲಂಚದ ಹಣ ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಕೋಲಾರ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿ ಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ.

## ದಾವಣಗೆರೆ

ದಾವಣಗೆರೆ ಜಿಲ್ಲೆ ಚನ್ನಗಿರಿ ತಾಲ್ಲೂಕು ನಿವಾಸಿಯಾಗಿರುವ ಫಿರ್ಯಾದಿರವರು ಕೋಆಪರೇಟಿವ್ ಸೊಸೈಟಿ ನೊಂದಣಿಗಾಗಿ ಅರ್ಜಿ ಸಲ್ಲಿಸಿರುತ್ತಾರೆ. ಶ್ರೀಮತಿ.ಗೀತಾ, ಕಛೇರಿ ಶಾಖಾಧೀಕ್ಷಕರು, ಅಸಿಸ್ಟೆಂಟ್ ರಿಜಿಸ್ಟ್ರಾರ್ ಆಫ್ ಕೋಆಪ್‌ರೇಟಿವ್ ಸೊಸೈಟೀಸ್ ರವರ ಕಛೇರಿ, ದಾವಣಗೆರೆ ರವರು ಅರ್ಜಿದಾರರ ಕೋಆಪರೇಟಿವ್ ಸೊಸೈಟಿ ನೊಂದಣಿ ಮಾಡಿಕೊಡಲು ₹ 25,000/– ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:05.07.2018 ರಂದು ಶ್ರೀಮತಿ.ಗೀತಾ, ಕಛೇರಿ ಶಾಖಾಧೀಕ್ಷಕರು, ಅಸಿಸ್ಟೆಂಟ್ ರಿಜಿಸ್ಟ್ರಾರ್ ಆಫ್ ಕೋಆಪ್‌ರೇಟಿವ್ ಸೊಸೈಟೀಸ್ ರವರ ಕಛೇರಿ, ದಾವಣಗೆರೆ ರವರು ಅರ್ಜಿದಾರರಿಂದ ₹ 15,000/– ಲಂಚದ ಹಣ ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ದಾವಣಗೆರೆ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿ ಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ.

## ಬೆಂಗಳೂರು ಜಲಮಂಡಲಿ : ಜುಲೈ 06 ರಂದು ಪೂರ್ವ–1 ಉಪವಿಭಾಗದಲ್ಲಿ ನೀರಿನ ಅದಾಲತ್

*****

ಬೆಂಗಳೂರು ಜಲಮಂಡಲಿಯ (ಪೂರ್ವ–1) ಉಪವಿಭಾಗದಲ್ಲಿ ದಿ:06.07.2018 ರಂದು ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

ದಿನಾಂಕ: 06.07.2018 ರಂದು (ಪೂರ್ವ–1) ಉಪವಿಭಾಗ ವ್ಯಾಪ್ತಿಗೆ ಬರುವ ಹೆಚ್.ಆರ್.ಬಿ.ಆರ್ ಲೇಔಟ್, ಕಲ್ಯಾಣ ನಗರ, ಓ.ಎಂ.ಬಿ.ಆರ್ ಲೇ ಔಟ್, & ಹೆಚ್.ಬಿ.ಆರ್ ಲೇಔಟ್ ಸೇವಾಠಾಣೆಗಳಿಗೆ ಸಂಬಂಧಿಸಿದ ವಿವಾದಗಳನ್ನು 1ನೇ ಬ್ಲಾಕ್, ಹೆಚ್.ಆರ್.ಬಿ.ಆರ್ ಲೇಔಟ್, ಕಲ್ಯಾಣ ನಗರ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: ಕಾರ್ಯನಿರ್ವಾಹಕ ಅಭಿಯಂತರರು (ಪೂರ್ವ)22945158. ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಪೂರ್ವ–1) ಉಪವಿಭಾಗ–22945170

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರುನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ–22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ– 8762228888 ಗೆ ಸಂಪರ್ಕಿಸಬಹುದಾಗಿದೆ.

ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್‌ಗಳ ಸೌಲಭ್ಯ ಬಳಸಿಕೊಳ್ಳ ಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಕೃಷಿ ಪ್ರಶಸ್ತಿಗಾಗಿ ರೈತರಿಂದ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 5 (ಕರ್ನಾಟಕ ವಾರ್ತೆ)

ಕೃಷಿ ಇಲಾಖೆ 2018-19 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೃಷಿ ಪ್ರಶಸ್ತಿ (ಬೆಳೆ ಸ್ಪರ್ಧೆ)ಗಾಗಿ ರೈತರಿಂದ ಅರ್ಜಿ ಆಹ್ವಾನಿಸಿದೆ.

ರಾಜ್ಯ, ಜಿಲ್ಲಾ, ತಾಲ್ಲೂಕುಮಟ್ಟದ ಕೃಷಿ ಪ್ರಶಸ್ತಿಗೆ ಅನ್ವಯಿಸುವಂತೆ ನಿಗಧಿತ ನಮೂನೆಯಲ್ಲಿ ಒಂದೇ ಅರ್ಜಿಯನ್ನು ಸಲ್ಲಿಸಬೇಕು.

ಪ್ರವೇಶ ಶುಲ್ಕ ಪರಿಶಿಷ್ಟ ಜಾತಿ/ವರ್ಗದ ರೈತರಿಗೆ ರೂ. 25/- ಮತ್ತು ಸಾಮಾನ್ಯ ವರ್ಗದ ರೈತರಿಗೆ ರೂ. 100/- ಆಗಿರುತ್ತದೆ. ಅರ್ಜಿ ಸಲ್ಲಿಸಲು ಆಗಸ್ಟ್ 31, 2018 ಕೊನೆಯ ದಿನಾಂಕವಾಗಿರುತ್ತದೆ.

ಸ್ಪರ್ಧಿಸಬಹುದಾದ ಬೆಳೆಗಳ ವಿವರಗಳು, ಅರ್ಜಿ ನಮೂನೆ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ವಿಸ್ತರಣಾ ಕಾರ್ಯಕರ್ತರನ್ನಾಗಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.